# ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.,

**ಶಾಸನ ಬದ್ಧ ಸಹಕಾರಿ ಸಂಸ್ಥೆ**

**ನಿರ್ಮಾಣ ಭವನ, ಡಾ. ರಾಜಕುಮಾರ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು–560010.**

**www.souharda.coop, Ph: 080-23378375-80, E-mail: souharda@souharda.coop**


**ಸಂಖ್ಯೆ : ಸಂಸ/ಶಿವಿ/ತ/ಸ–6/1/2018–19** **ದಿನಾಂಕ: 25.07.2018**

**ಇವರಿಗೆ,**

ಮಾನ್ಯ ಅಧ್ಯಕ್ಷರು

**ಮಾನ್ಯರೇ,**

**ವಿಷಯ:** ಸಮಾಲೋಚನಾ ಸಭೆ ದಿನಾಂಕ 09.08.2018 ರಂದು ಭಾಗವಹಿಸುವ ಕುರಿತು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು, ಸೌಹಾರ್ದ ಸಹಕಾರಿ ಕಾಯ್ದೆಯಡಿಯಲ್ಲಿ ಶಾಸನಬದ್ಧವಾಗಿ ರಚನೆಗೊಂಡು, ಅರೆನ್ಯಾಯಿಕ ಅಧಿಕಾರ(Quasi Judicial)ವನ್ನು ಹೊಂದಿ ಕಾರ್ಯನಿರ್ವಹಿಸುತ್ತಿರುವ ಸೌಹಾರ್ದ ಸಹಕಾರಿಗಳ ಮಾತೃ ಸಂಸ್ಥೆಯಾಗಿದೆ. ಈ ಕಾಯ್ದೆಯಡಿಯಲ್ಲಿ 4352 ಸೌಹಾರ್ದ ಸಹಕಾರಿಗಳು ಕಾರ್ಯ ನಿರ್ವಹಿಸುತ್ತಿವೆ. ರಾಜ್ಯದ ಸಹಕಾರಿ ಕ್ಷೇತ್ರಕ್ಕೆ ಒಂದು ಹೊಸ ಚೈತನ್ಯವನ್ನು ನೀಡಿರುವ ಕ್ಷೇತ್ರ ಇದಾಗಿದೆ. ಈ ಸೌಹಾರ್ದ ಸಹಕಾರಿಗಳ ಮಾತೃ ಸಂಸ್ಥೆಯಾಗಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು ಕಾರ್ಯನಿರ್ವಹಿಸುತ್ತಿದ್ದು, ರಾಜ್ಯದ ಸೌಹಾರ್ದ ಸಹಕಾರಿಗಳ ಅಭಿವೃದ್ಧಿಗೆ ಪೂರಕವಾಗುವಂತಹ ಹಲವಾರು ತರಬೇತಿ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳುತ್ತ ಬಂದಿದೆ.

ಪ್ರಸ್ತುತ ಸಂಯುಕ್ತ ಸಹಕಾರಿಯ ವಾರ್ಷಿಕ ಸಾಮಾನ್ಯ ಸಭೆ ಸೆಪ್ಟಂಬರ್ ಮಾಹೆಯಲ್ಲಿ ಬೆಂಗಳೂರಿನಲ್ಲಿ ಜರುಗಲಿದೆ. ಈ ಸಭೆಯಲ್ಲಿ ರಾಜ್ಯದ ಸೌಹಾರ್ದ ಸಹಕಾರಿ ಕ್ಷೇತ್ರದ ನೇತೃತ್ವವನ್ನು ವಹಿಸಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು 2017–18ನೇ ಸಾಲಿನಲ್ಲಿ ಜರುಗಿಸಿದ ಎಲ್ಲಾ ಕಾರ್ಯಕ್ರಮಗಳ ಬಗ್ಗೆ ಸಮಗ್ರ ಚರ್ಚೆಗಳು ನಡೆಸುವುದು ತಮಗೆ ತಿಳಿದೆ. ಈ ಸಾಮನ್ಯ ಸಭೆಯ ಪೂರ್ವಭಾವಿಯಾಗಿ ಬೆಂಗಳೂರು ವಿಭಾಗದ ಆಯ್ದ ಪ್ರಮುಖ ಸೌಹಾರ್ದ ಸಹಕಾರಿಗಳ ಅಧ್ಯಕ್ಷರೊಡನೆ ಸಮಾಲೋಚನೆ ನಡೆಸುವುದು, ಸಲಹೆ ಹಾಗೂ ಮಾರ್ಗದರ್ಶನಗಳನ್ನು ಪಡೆಯುವುದು ಸೂಕ್ತವೆಂದು ಸಂಯುಕ್ತ ಸಹಕಾರಿಯು ಭಾವಿಸಿದೆ.

ಈ ಹಿನ್ನಲೆಯಲ್ಲಿ **ದಿನಾಂಕ 09.08.2018** ರಂದು **ಕಣ್ವ ಸ್ಟಾರ್ ರೆಸಾರ್ಟ್, ಹಿಮಾಲಯ ಡಗ್ಸ್, ಎದುರು, ಗೋಲ್ಡ್‌ನ್ ಸ್ವಾ ಹತ್ತಿರ, ಬೆಂಗಳೂರು ತುಮಕೂರು ಹೆದ್ದಾರಿಯಲ್ಲಿ ಹುಸ್ಕೂರು ರಸ್ತೆ, ಎಪಿಎಂಸಿ ಮಾರ್ಕೆಟ್ ಪಕ್ಕ, ಬೆಂಗಳೂರು** ಈ ಸ್ಥಳದಲ್ಲಿ **ಬೆಳಿಗ್ಗೆ 10:00 ಗಂಟೆಗೆ** ಆಯ್ದ ಸೌಹಾರ್ದ ಸಹಕಾರಿಗಳ ಅಧ್ಯಕ್ಷರುಗಳ ಸಭೆಯನ್ನು ಸಂಯುಕ್ತ ಸಹಕಾರಿಯ ಮಾನ್ಯ ಅಧ್ಯಕ್ಷರಾರದ ಶ್ರೀ ಬಿ. ಹೆಚ್. ಕೃಷ್ಣಾರೆಡ್ಡಿರವರ ಅಧ್ಯಕ್ಷತೆಯಲ್ಲಿ ಹಾಗೂ ವಿಭಾಗದ ಎಲ್ಲ ನಿರ್ದೇಶಕರುಗಳ ಉಪಸ್ಥಿತಿಯಲ್ಲಿ ಕರೆಯಲಾಗಿದೆ. ತಮ್ಮ ಸಲಹೆ ಮಾರ್ಗದರ್ಶನಗಳನ್ನು ಪಡೆದುಕೊಂಡ 2018–19ನೇ ಸಾಲಿನ ಕ್ರಿಯಾಯೋಜನೆಯನ್ನು ಸಿದ್ಧಪಡಿಸಲಾಗುವುದು ಮತ್ತು ಸಂಯುಕ್ತ ಸಹಕಾರಿಯ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಲು ಸಾಧ್ಯವಾಗುತ್ತದೆ. ಆದ್ದರಿಂದ ಈ ಸಭೆಯಲ್ಲಿ ತಾವು ತಪ್ಪದೆ ಭಾಗವಹಿಸಿ, ನಿಮ್ಮ ಸಲಹೆ ಹಾಗೂ ಮಾರ್ಗದರ್ಶನಗಳನ್ನು ನೀಡಲು ಕೋರಿದೆ. ತಮ್ಮ ಭಾಗವಹಿಸುವಿಕೆಯನ್ನು ಲಗತ್ತಿಸಿದ ಫಾರ್ಮನಲ್ಲಿ ಭರ್ತಿಮಾಡಿ ಕಳುಹಿಸುವ ಮೂಲಕ ಧೃಡೀಕರಿಸಲು ಕೋರಿದೆ.

**ವಂದನೆಗಳೊಂದಿಗೆ,**

ತಮ್ಮ ವಿಶ್ವಾಸಿ,

(ಶರಣಗೌಡ ಜಿ. ಪಾಟೀಲ)

ವ್ಯವಸ್ಥಾಪಕ ನಿರ್ದೇಶಕ